1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ: 1828/2025

ಚಾಸಾ: 4 ಪ್ರಾಸಾ:7

ದಿನಾಂಕ: 16.06.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಪ್ರಶಾಂತ |
| ತಂದೆಯ ಹೆಸರು | : | ಆನಂದ ಸಾರಂಗ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಮೀನುಗಾರಿಕೆ |
| ವಾಸ ಸ್ಥಳ | : | ಮದ್ದುಗುಡ್ಡೆ, ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ದಿನಾಂಕ 29.03.2015 ರಂದು ಮಧ್ಯಾಹ್ನ 12 ರಿಂದ 12.30 ರವರೆಗೆ ನಾನು ಕೆಲಸ ಮುಗಿಸಿಕೊಂಡು ಬಂದಿದ್ದೆನು. ಅಷ್ಟರಲ್ಲಿ ಗಲಾಟೆ ಆಗಿತ್ತು. ಚಾಸಾ.1ರವರು ನನ್ನ ತಂದೆ. ಸದ್ರಿಯವರು ಮರಣ ಹೊಂದಿರುತ್ತಾರೆ. ಸಂಜೆ ಚಾಸಾ.1ರವರು ದೂರನ್ನು ಕೊಟ್ಟಿದ್ದರು.

ಪೊಲೀಸರು ನನ್ನ ವಿಚಾರಣೆ ಮಾಡಿರುವುದಿಲ್ಲ. 1ನೇ ಆರೋಪಿ ನನ್ನ ತಂದೆಯ ತಂಗಿಯ ಗಂಡ. ಈಗ ಸಾಕ್ಷಿಗೆ ಮುದ್ದೆಮಾಲು 1 ರಿಂದ 3ಗಳನ್ನು ತೋರಿಸಲಾಗಿ, ಸದ್ರಿ ಮುದ್ದೆಮಾಲುಗಳನ್ನು ಗುರುತಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿನಾಂಕ **29.03.2015** ರಂದು ನೀವು ಮನೆಯಲ್ಲಿದ್ದಾಗ ಮಧ್ಯಾಹ್ನ **12** ಗಂಟೆಗೆ **1**ನೇ ಆರೋಪಿಯು ನಿಮ್ಮ ಮನೆಯ ಜಾಗಕ್ಕೆ ಅತಿಕ್ರಮಣ ಪ್ರವೇಶ ಮಾಡಿ**,**

ತೆಂಗಿನ ಕಾಯಿ ಕೀಳಲು ಬಂದಿದ್ದರು ಎಂದರೆ ಸಾಕ್ಷಿಯು ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಆಗ ನಿಮ್ಮ ತಂದೆಯವರಾದ ಚಾಸಾ.1ರವರು ಏಕೆ ಕಾಯಿ ಕೀಳುತ್ತಿದ್ದೀರಿ ಎಂದು ಕೇಳಿದಾಗ ಆರೋಪಿತರು ಮುದ್ದೆಮಾಲು 1 ರಿಂದ 3ರಲ್ಲಿ ನಿಮ್ಮ ತಂದೆಯವರಿಗೆ ಹಲ್ಲೆ ಮಾಡಿರುತ್ತಾರೆ ಎಂದರೆ ಸಾಕ್ಷಿಯು ನೋಡಿರುವುದಿಲ್ಲ ಎಂದು ನುಡಿಯತ್ತಾರೆ. ನಿಮ್ಮ ಮತ್ತು ಆರೋಪಿತರ ಮಧ್ಯೆ ರಾಜಿ ಮಾತುಕತೆ ನಡೆದಿತ್ತು ಎಂದರೆ ಸಾಕ್ಷಿಯು ಹೌದು ಎಂದು ನುಡಿಯತ್ತಾರೆ.

ನೀವು ದಿಃ**02.04.2015** ರಂದು ಪೊಲೀಸರಿಗೆ ಈ ಘಟನೆಯ ಬಗ್ಗೆ ಹೇಳಿಕೆ ನೀಡಿರುತ್ತೀರಿ ಎಂದರೆ ಸಾಕ್ಷಿಃ ಇಲ್ಲ ಎಂದು ನುಡಿಯುತ್ತಾರೆ. ಆರೋಪಿತರ ನಿಮ್ಮ ಸಂಬಂಧಿಕರಾದ ಕಾರಣ ಅವರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸಾಕ್ಷಿಃ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ನಿಪಿ.**5** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**